# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 05.11.2011**

ಎಲ್ಲಾ ಕಾರ್ಯಪಾಲಕ ಅಭಿಯಂತರರುಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳ ಇತಿಹಾಸವನ್ನು ಕಡ್ಡಾಯವಾಗಿ ಡಿಸೆಂಬರ್ 2011ರ ಒಳಗಾಗಿ ಸಿದ್ಧಪಡಿಸಲು ಪಾಲಿಕೆ ಆಯುಕ್ತರು ಇಂದು ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.

ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ರಾಜರಾಜೇಶ್ವರಿನಗರ ವಲಯದಲ್ಲಿ ತಪಾಸಣೆ ಕೈಗೊಂಡು ರಸ್ತೆಗಳ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ರಸ್ತೆಗಳ ಇತಿಹಾಸ ಸರಿಯಾಗಿ ನಿರ್ವಹಿಸದೇ ಇರುವ ಕಾರಣ ಮುಖ್ಯ ಅಭಿಯಂತರರನ್ನು ತರಾಟೆಗೆ ತೆಗೆದುಕೊಂಡರು. ರಸ್ತೆ ಅಭಿವೃದ್ಧಿಗಾಗಿ ಕಡತಗಳನ್ನು ಮಂಡಿಸುವಾಗ ರಸ್ತೆಗಳ ಇತಿಹಾಸದ ವಿವರಗಳೊಂದಿಗೆ ಮೂಲಕಡತದಲ್ಲಿ ಮಂಡಿಸಬೇಕು. ಪ್ರತಿಸಲ ಹೊಸದಾಗಿ ಕಡತಗಳನ್ನು ಮಂಡಿಸಿದರೆ ಹಿಂದೆ ಕೈಗೊಂಡ ಕಾಮಗಾರಿಗಳ ವಿವರಗಳು ಲಭ್ಯವಿರುವುದಿಲ್ಲ. ಆದ್ದರಿಂದ ರಸ್ತೆ ಇತಿಹಾಸದ ವಿವರಗಳನ್ನು ಕಡ್ಡಾಯವಾಗಿ ಗಣಕಯಂತ್ರದಲ್ಲಿ ದಾಖಲಿಸಬೇಕು. ಕೆಲವು ಉಪ ವಿಭಾಗದಲ್ಲಿ ರಸ್ತೆ ಇತಿಹಾಸದ ವಿವರಗಳನ್ನು ದಾಖಲೆ ಮಾಡಿದ್ದಾರೆ. ಇನ್ನೂ ಕೆಲವು ರಸ್ತೆಗಳ ವಿವರಗಳನ್ನು ದಾಖಲೆ ಮಾಡಿರುವುದಿಲ್ಲ. ಕೇವಲ manual ಮಾಡಿದರೆ ಸಾಲದು ಅದನ್ನು ಡಾಟಾಬೇಸ್‌ನಲ್ಲಿ ಸಂಗ್ರಹಿಸಿ, ಸಾರ್ವಜನಿಕರಿಗೆ ಮಾಹಿತಿ ಲಭ್ಯವಾಗುವಂತೆ ಮಾಡಲು ಮುಖ್ಯ ಅಭಿಯಂತರರು (ರಾಜರಾಜೇಶ್ವರಿನಗರ) ವಲಯ ರವರಿಗೆ ಸೂಚನೆ ನೀಡಿದ್ದಾರೆ.

ಪಾಲಿಕೆ ಆಯುಕ್ತರು ಇಂದು ಬೆಳಿಗ್ಗೆ ಮೊದಲು ಉತ್ತರಹಳ್ಳಿ ವಾರ್ಡ್ ನಂ.184ರ ಅರೆಹಳ್ಳಿ (ಎ.ಜಿ.ಎಸ್.) ಬಡಾವಣೆಯಲ್ಲಿ ಉದ್ಯಾನವನ ಅಭಿವೃದ್ಧಿಪಡಿಸಲು ನಿಗದಿಪಡಿಸಿದ ನಿವೇಶನದಲ್ಲಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ, ಈ ಬಡಾವಣೆಯಲ್ಲಿ ಸಸಿ ನೆಡಲು ಮತ್ತು ಮಳೆ ನೀರನ್ನು ಸಂಗ್ರಹಿಸಲು ಸಾಕಷ್ಟು ಅವಕಾಶ ಇರುವುದರಿಂದ ಇದೊಂದು ಮಾದರಿ ಬಡಾವಣೆ ಮಾಡಲು ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರೊಂದಿಗೆ ಸಹಕರಿಸಲು ಅಭಿಯಂತರರುಗಳಿಗೆ ಸೂಚನೆ ನೀಡಿದರು.

ತದನಂತರ ಪೂರ್ಣಪ್ರಜ್ಞ ಬಡಾವಣೆಗೆ ಭೇಟಿ ನೀಡಿ, ಮಳೆ ನೀರಿನ ಸಂಗ್ರಹಣೆಗಾಗಿ ಒಂದೂವರೆ ಎಕರೆ ಪ್ರದೇಶದಲ್ಲಿ ನಿರ್ಮಿಸಲಾದ ಕೆರೆಯನ್ನು ವೀಕ್ಷಿಸಿದರು. ಇಡೀ ಬಡಾವಣೆಯಲ್ಲಿ ಬಿದ್ದ ಮಳೆ ನೀರನ್ನು ಸಂಗ್ರಹಿಸಲು ಕೆರೆ ನಿರ್ಮಿಸಲಾಗಿದ್ದು, ಈ ವರ್ಷ ಮಳೆಯಿಂದ ಕೆರೆ ಸಂಪೂರ್ಣವಾಗಿ ತುಂಬಿಕೊಂಡಿದೆ. ಇದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ಅಂತರ್ಜಲ ಮಟ್ಟ ಹೆಚ್ಚಾಗಿದೆ ಎಂದು ತಿಳಿಸಿದರು. ನಗರದ ಇನ್ನುಳಿದ ಪ್ರದೇಶಗಳಿಗೆ ಇದೊಂದು ಮಾದರಿಯ ಕೆರೆಯಾಗಿರುತ್ತದೆ. ಶಿಕ್ಷಣ ಮತ್ತು ಕ್ರೀಡಾ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಕೆ. ರಮೇಶ್ ರಾಜು ರವರು ಈ ಮಳೆ ನೀರು ಸಂಗ್ರಹಣೆ ಘಟಕ ನಿರ್ಮಿಸುವಲ್ಲಿ ಸಾಕಷ್ಟು ಆಸಕ್ತಿ ತೋರಿಸಿರುವುದರಿಂದ ಇಂತಹ ಉತ್ತಮ ಕೆಲಸ ಮಾಡಲು ಸಾಧ್ಯವಾಯಿತು ಎಂದು ಶ್ಲಾಘಿಸಿ, ಈ ಪ್ರದೇಶದಲ್ಲಿ ಇನ್ನೂ ಹೆಚ್ಚಿನ ಮಳೆ ನೀರಿನ ಸಂಗ್ರಹಣೆ ಘಟಕಗಳನ್ನು ಸ್ಥಾಪಿಸಲು ಸಹಕರಿಸುವಂತೆ ಕೋರಿದರು.

ನಂತರ ಆಯುಕ್ತರು ರಾಜರಾಜೇಶ್ವರಿನಗರ ದೇವಸ್ಥಾನದ ಹಿಂಭಾಗದಲ್ಲಿ ಇರುವ ಕೆಂಚೇನಹಳ್ಳಿ ಕೆರೆಗೆ ಬೃಹತ್ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಜಿ.ಹೆಚ್. ರಾಮಚಂದ್ರ ರವರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸದರಿ ಕೆರೆಯನ್ನು ಅಭಿವೃದ್ಧಿಪಡಿಸುವುದು ಮತ್ತು ಕೊಳಚೆ ನೀರು ಕೆರೆಗೆ ಸೇರದಂತೆ ಕ್ರಮ ಕೈಗೊಳ್ಳಲು ವಿವರವಾದ ಯೋಜನಾ ವರದಿ ಸಿದ್ಧಪಡಿಸಲು ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು. ಹಾಗೂ ಹಲಗೆವಡೇರಹಳ್ಳಿ ಕೆರೆ ಮತ್ತು ಕೆಂಚೇನಹಳ್ಳಿ ಕೆರೆ ಒಟ್ಟಿಗೆ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ನಂತರ ಜಯಣ್ಣ ಬಡಾವಣೆಯಲ್ಲಿ ಹಾದುಹೋಗುವ ಬೃಹತ್ ನೀರುಗಾಲುವೆಯಲ್ಲಿ ಹೂಳು ತುಂಬಿಕೊಂಡು ಮಳೆಗಾಲದಲ್ಲಿ ಉಕ್ಕಿ ಹರಿದು ಮನೆಗಳಿಗೆ ನುಗ್ಗುತ್ತಿದೆ ಎಂದು ಸಾರ್ವಜನಿಕರು ದೂರು ನೀಡಿದರು. ಬೃಹತ್ ನೀರುಗಾಲುವೆ ಮುಖ್ಯ ಅಭಿಯಂತರರಿಗೆ ಸೂಚನೆ ನೀಡಿ, ಈಗ ಮಳೆಗಾಲ ಮುಗಿಯುತ್ತಾ ಬಂದಿರುವುದರಿಂದ ಕೂಡಲೇ ನೀರುಗಾಲುವೆ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀಮತಿ ವೀಣಾ ನಾಗರಾಜು ಹಾಗೂ ಪಾಲಿಕೆಯ ಅಧಿಕಾರಿಗಳು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 05.11.2011**

ಇಂದು ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿನ ವಾರ್ಡ್ ನಂ.159 ಕೆಂಗೇರಿಯಲ್ಲಿ ಸುಮಾರು ರೂ.434.00 ಲಕ್ಷಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಹಮ್ಮಿಕೊಳ್ಳಲಾದ 2010-11ನೇ ಸಾಲಿನ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆಯ ಉದ್ಘಾಟನೆಯನ್ನು ಮಾನ್ಯ ಇಂಧನ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವರಾದ ಕು|| ಶೋಭಾ ಕರಂದ್ಲಾಜೆ ರವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ಭಾರತಿ ಶೆಟ್ಟಿ, ವಿಧಾನ ಪರಿಷತ್ ಸದಸ್ಯರು, ಶ್ರೀ ರ. ಆಂಜನಪ್ಪ, ಅಧ್ಯಕ್ಷರು, ತೋಟಗಾರಿಕೆ ಸ್ಥಾಯಿ ಸಮಿತಿ ಹಾಗೂ ಸ್ಥಳೀಯ ಗಣ್ಯವ್ಯಕ್ತಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**